## ಹಿರಿಯ ಸಿವಿಲ್ ಜಡ್ಜ್ ಹಾಗೂ ಜೆ. ಎಂ.ಎಫ್.ಸಿ ನ್ಯಾಯಾಲಯ ಕೆ .ಆರ್. ಪೇ

| | | |
|---|---|---|
| ಸಿಸಿ ನಂಬರ್ 94/2018 | ಸಿಡಬ್ಲ್ಯೂ-3 | ಪಿಡಬ್ಲ್ಯೂ-3 |

ಸಾಕ್ಷಿದಾರರ ಹೆಸರು : ಸಿದ್ದೇಗೌಡ ಹೆಚ್ ಎಸ್

ತಂದೆಯ ಹೆಸರು : ಲೇಟ್ ಉಗ್ರೇಗೌಡ

ವಯಸ್ಸು : 66 ವರ್ಷ

ಉದ್ಯೋಗ : ನಿವೃತ್ತ ಎ ಎಸ್ ಐ

ವಾಸ ಸ್ಥಳ : ಮೈಸೂರು

ದಿನಾಂಕಃ 08.01.2024 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದೆ.

**ಮುಖ್ಯ ವಿಚಾರಣೆಃ ಎಪಿಪಿ ರವರಿಂದ**

ನಾನು ಜೂನ್ 2015 ರಿಂದ ಡಿಸೆಂಬರ್ 2016 ರವರೆಗೆ ನಾನು ಕಿಕ್ಕೇರಿ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ ಆಗಿ ಕೆಲಸ ನಿರ್ವಹಿಸಿರುತ್ತೇನೆ. ದಿನಾಂಕ 01.11.2016 ಸಂಜೆ 8.15 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಪಿಎಸ್ ಐ ರವರು ನೀಡಿದ ವರದಿಯನ್ನು ಸ್ವೀಕರಿಸಿದ್ದೇನು. ಸದರಿ ವರದಿಯ ಆಧಾರದ ಮೇಲೆ ನಾನು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿದ್ದೇನು. ವರದಿಯನ್ನು ನಿಪಿ-4 ಎಂದು ಅದರಲ್ಲಿಯ ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿಪಿ-5 ಎಂದು ಅದರಲ್ಲಿಯ ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ವಶಪಡಿಸಿಕೊಂಡ ಮುದ್ದೆ ಮಾಲುಗಳನ್ನು ಪಿ.ಎಫ್ ಪಟ್ಟಿಯಲ್ಲಿ ನಮೂದಿಸಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ನನ್ನ ಸಮಕ್ಷಮ ಹಾಜರುಪಡಿಸಿದ ಆರೋಪಿಯ ವಿರುದ್ದ ದಸ್ತಗಿರಿ ಕ್ರಮವನ್ನು ಜರುಗಿಸಿ ನ್ಯಾಯಾಲಯಾಕ್ಕೆ ಹಾಜರುಪಡಿಸಿರುತ್ತೇನೆ. ಸಾಕ್ಷಿದಾರರಾದ ಮಂಜೇಗೌಡ, ಚಂದ್ರೇಗೌಡ, ರೇವಯ್ಯ, ವಿನೋದ್ ಮತ್ತು ರಜಿತ್ ರವರ ಹೇಳಿಕೆಗಳನ್ನು ಪಡೆದುಕೊಂಡೆನು.

ಮುದ್ದೆ ಮಾಲುಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಕಳುಹಿಸಿಕೊಟ್ಟೇನು. ಆ ಬಗ್ಗೆ ವರದಿಯನ್ನು ಸ್ವೀಕರಿಸಿದ್ದೇನು. ಸದರಿ ವರದಿಯನ್ನು ನಿಪಿ-6 ಎಂದು ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಯನ್ನು ಪಿಎಸ್ ಐರವರಿಗೆ ಕಡತವನ್ನು ವಹಿಸಿಕೊಟ್ಟಿರುತ್ತೇನೆ. ನ್ಯಾಯಾಲಯದ ಮುಂದೆ ಇರುವ ವ್ಯಕ್ತಿಯೇ ನಾನು ದಸ್ತಗಿರಿ ಮಾಡಿದ ಆರೋಪಿಯಾಗಿರುತ್ತಾರೆ. ವಶಪಡಿಸಿಕೊಂಡ ಮುದ್ದೆಮಾಲುಗಳನ್ನು ನಾನು ನೋಡಿದರೆ ಗುರುತಿಸುತ್ತೇನೆ. ಈ ಹಂತದಲ್ಲಿ ಮಾನ್ಯ ಸಸಅ ರವರು ಮುಂದಿನ ಮುಖ್ಯವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಸಾಕ್ಷಿಗೆ ಓದಿ ಹೇಳಿ ಕೇಳಿ ಸರಿ ಇದೆ.

(ಶಮೀರ್.ಪಿ.ನಂದ್ಯಾಲ್)

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಕೆ.ಆರ್.ಪೇಟೆ.